## ಕರ್ನಾಟಕ ಸರ್ಕಾರ

XXX
TD, ACM
Sri: Srinivas C. gou
upload on DTE website
for necessary action
2/8

ಸಂಖ್ಯೆ: ಇಡಿ 49 ಟಿಇಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01-08-2016

## ಸುತ್ತೋಲೆ

ವಿಷಯ:- ವೃತ್ತಿಪರ ಸಂಸ್ಥೆಗಳು ಹೆಚ್ಚಿನ ಶುಲ್ಕವನ್ನು ಪಡೆಯುತ್ತಿರುವ ಕುರಿತು.

>>><<<

ವೃತ್ತಿಪರ ಶಿಕ್ಷಣ ಕೋರ್ಸು ಆದ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಪದವಿ ಕೋರ್ಸುಗಳ ವಿದ್ಯಾಭ್ಯಾಸ ಹೊಂದುವ ಸಲುವಾಗಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ವಿವಿಧ ಅನುದಾನಿತ/ ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳ/ ಶಿಕ್ಷಣ ಸಂಸ್ಥೆಗಳಿಗೆ ಸೀಟು ಹಂಚಿಕೆಗೊಂಡ ವಿದ್ಯಾರ್ಥಿಗಳು ಸಂಬಂಧಿಸಿದ ಕಾಲೇಜು/ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶಾತಿ ಹೊಂದುವ ಸಂದರ್ಭದಲ್ಲಿ ಹಲವಾರು ಖಾಸಗಿ ಅನುದಾನಿತ/ಅನುದಾರಹಿತ ಶಿಕ್ಷಣ ಸಂಸ್ಥೆಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರವೇಶಾತಿಗೆ ನಿರ್ದಿಷ್ಟಪಡಿಸಿದ ಶುಲ್ಕವನ್ನು ಭರಿಸಿಕೊಳ್ಳದೇ, ಇಂಜಿನಿಯರಿಂಗ್ ಶಿಕ್ಷಣ ಶುಲ್ಕದ ಬಗ್ಗೆ ಸರ್ಕಾರವು ಹೊರಡಿಸಿರುವ ಆದೇಶ ಸಂಖ್ಯೆ ಇಡಿ 21 ಟಿಇಸಿ 2016, ದಿ:31-05-2016ರಲ್ಲಿ ನಿಗಧಿಪಡಿಸಿರುವ ಶುಲ್ಕವನ್ನು ಪಡೆಯದೇ ಹೆಚ್ಚಿನ ಶುಲ್ಕವನ್ನು ಭರಿಸುವಂತೆ ಒತ್ತಾಯಿಸುತ್ತಿರುವುದು ಸರ್ಕಾರದ ಹಾಗೂ ಸಂಬಂಧಪಟ್ಟ ಪ್ರಾಧಿಕಾರದ ಗಮನಕ್ಕೆ ಬಂದಿರುತ್ತದೆ.

ಈ ರೀತಿಯ ನಿಯಮಬಾಹಿರ ವರ್ತನೆಯಿಂದಾಗಿ ಹಲವು ಪೋಷಕರಿಂದ ಆಕ್ಷೇಪಣೆಗಳು, ಟೀಕೆಗಳು ಸ್ವೀಕೃತವಾಗುತ್ತಿದ್ದು, ಹೆಚ್ಚಿನ ಶುಲ್ಕವನ್ನು ಭರಿಸುವಂತೆ ಒತ್ತಾಯಿಸುತ್ತಿರುವ ಕ್ರಮವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಆದುದರಿಂದ ಸಂಬಂಧಪಟ್ಟ ಎಲ್ಲಾ ವೃತ್ತಿಪರ ಶಿಕ್ಷಣ ಸಂಸ್ಥೆಗಳು ವೃತ್ತಿಪರ ಕೋರ್ಸುಗಳಾದ ಇಂಜಿನಿಯರಿಂಗ್/ ಆರ್ಕಿಟೆಕ್ಚರ್ ಕೋರ್ಸುಗಳಿಗೆ ಸಂಬಂಧಿಸಿದಂತೆ ಈಗಾಗಲೇ ಸಮ್ಮತಾಭಿಪ್ರಾಯದ ಒಪ್ಪಂದದ ಅನ್ವಯ ನಿಗಧಿಪಡಿಸಿ ಹೊರಡಿಸಲಾದ ಮೇಲೆ ನಮೂದಿಸಿರುವ ಸರ್ಕಾರದ ಆದೇಶದಲ್ಲಿ ನಿಗಧಿಪಡಿಸಲಾದ ಶುಲ್ಕವನ್ನು ಮಾತ್ರ ಪಡೆಯುವಂತೆ ಈ ಮೂಲಕ ಸೂಚಿಸಿದೆ. ಇದಕ್ಕೆ ತಪ್ಪಿದಲ್ಲಿ ಸಂಬಂಧಿಸಿದ ಶಿಕ್ಷಣ ಸಂಸ್ಥೆಗಳ ವಿರುದ್ಧ ನಿಯಮಾನುಸಾರದ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದೆ.

S. Venkatesh

(ಎಸ್.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)
1/8/16

ಇವರಿಗೆ,

1) ಅಧ್ಯಕ್ಷರು/ಕಾರ್ಯದರ್ಶಿಗಳು, ರಾಜ್ಯದಲ್ಲಿನ ಎಲ್ಲಾ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಆಡಳಿತ ಮಂಡಳಿಗಳು
2) ಪ್ರಾಂಶುಪಾಲರು, ರಾಜ್ಯದಲ್ಲಿನ ಎಲ್ಲಾ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು
3) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.

4) ಕಾರ್ಯದರ್ಶಿಗಳು, ಕಾಮೆಡ್-ಕೆ, 17ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು –(ಈ ಸುತ್ತೋಲೆಯನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕ್ರಮವಹಿಸುವುದು)
6) ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಸಂಗಮ, ಬೆಳಗಾಂ
7) ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌದ, ಬೆಂಗಳೂರು.